ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ
ದೇವರಾಜ ಅರಸು ಭವನ, 4ನೇ ಮಹಡಿ, ನಂ 16ಡಿ, ಮಿಲ್ಲರ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು- 52

ಸಂಖ್ಯೆ: ದೇಹಿನಿ/ಸ/ಅಆ/ಸಿಆರ್–05/2017–18

ದಿನಾಂಕ: 23/05/2017

# ಪ್ರಕಟಣೆ

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಗಳ ಜನರ ಆರ್ಥಿಕ ಅಭಿವೃದ್ಧಿಗಾಗಿ 2017–18ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಕೆಳಕಂಡ ಹಿಂದುಳಿದ ವರ್ಗಗಳ ನಿರುದ್ಯೋಗಿ ಯುವಕರಿಗೆ ಟೂರಿಸ್ಟ್ ಟ್ಯಾಕ್ಸಿ/ಸರಕು ಸಾಗಾಣಿಕೆ ವಾಹನ ಖರೀದಿಸಲು ಸಹಾಯಧನ ಯೋಜನೆ ಹಾಗೂ ಹಿಂದುಳಿದ ವರ್ಗಗಳ ವಿಧವೆಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಆರ್ಥಿಕ ನೆರವು ಯೋಜನೆಗಳಲ್ಲಿ ಸೌಲಭ್ಯ ಪಡೆಯ ಬಯಸುವವರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ನಿಗದಿತ ಅರ್ಜಿ ನಮೂನೆಗಳನ್ನು ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿಯಲ್ಲಿ ಅಥವಾ ಆಯಾ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ವಿಸ್ತರಣಾಧಿಕಾರಿಗಳ ಕಛೇರಿಯಲ್ಲಿ ಅರ್ಜಿ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಸಲ್ಲಿಸಲು ಕೊನೆಯ ದಿನಾಂಕ:24/06/2017.

ಒಂದು ಬಾರಿ ನಿಗಮದ ಯಾವುದಾದರು ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

1. **ಹಿಂದುಳಿದ ವರ್ಗಗಳ ನಿರುದ್ಯೋಗಿ ಯುವಕರಿಗೆ ಟೂರಿಸ್ಟ್ ಟ್ಯಾಕ್ಸಿ/ಸರಕು ಸಾಗಾಣಿಕೆ ವಾಹನ ಖರೀದಿಸಲು ಸಹಾಯಧನ ಯೋಜನೆ:** ಹಿಂದುಳಿದ ವರ್ಗಗಳ 1000 ನಿರುದ್ಯೋಗಿ ಯುವಕರಿಗೆ ಶೇ.50ರಷ್ಟು ಟೂರಿಸ್ಟ್ ಟ್ಯಾಕ್ಸಿ ಖರೀದಿಸಲು ಹಾಗೂ ಶೇ.50ರಷ್ಟು ಸರಕು ಸಾಗಾಣಿಕೆ ವಾಹನ ಖರೀದಿಸಲು ಗರಿಷ್ಠ ರೂ.3.00ಲಕ್ಷಗಳು ಅಥವಾ ವಾಹನದ ಶೇ.50ರಷ್ಟು ಇವುಗಳಲ್ಲಿ ಯಾವುದು ಕಡಿಮೆಯೊ ಅಷ್ಟು ಸಹಾಯಧನ ಮಂಜೂರು ಮಾಡಲಾಗುವುದು. ಉಳಿಕೆ ಮೊತ್ತವನ್ನು ಬ್ಯಾಂಕ್ ಮೂಲಕ ಸಾಲದ ರೂಪದಲ್ಲಿ ಪಡೆಯುವುದು.
2. **ಹಿಂದುಳಿದ ವರ್ಗಗಳ ವಿಧವೆಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಆರ್ಥಿಕ ನೆರವು:** ಹಿಂದುಳಿದ ವರ್ಗಗಳಿಗೆ ಸೇರಿದ ವಿಧವೆಯರಿಗೆ ಸ್ವಯಂ ಉದ್ಯೋಗಕ್ಕೆ ಆರ್ಥಿಕ ಚಟುವಟಿಕೆ ಕೈಗೊಳ್ಳಲು ವಾರ್ಷಿಕ ಶೇ.4ರ ಬಡ್ಡಿದರದಲ್ಲಿ ರೂ.30000/–ಗಳ ಸಾಲ ಹಾಗೂ ರೂ.10000/–ಗಳ ಸಹಾಯಧನ ಹೀಗೆ ಒಟ್ಟು ರೂ.40000/–ಗಳ ಸೌಲಭ್ಯ ಒದಗಿಸಲಾಗುವುದು.

**ಮೇಲ್ಕಂಡ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಹೊಂದಿರಬೇಕಾದ ಸಾಮಾನ್ಯ ಅರ್ಹತೆಗಳು.**(1) ಅರ್ಜಿದಾರರು ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ ಮತ್ತು 3ಬಿಗೆ ಸೇರಿದವರಾಗಿರಬೇಕು.(ವಿಶ್ವಕರ್ಮ ಅದರ ಉಪ ಸಮುದಾಯಗಳನ್ನು ಮತ್ತು ಮತಿಯ ಅಲ್ಪಸಂಖ್ಯಾತರನ್ನು ಹೊರತುಪಡಿಸಿ) (2) ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.40,000/–ಗಳು ಪಟ್ಟಣ ಪ್ರದೇಶದವರಿಗೆ ರೂ.55,000/–ಗಳ ಒಳಗಿರಬೇಕು, (3) ಅರ್ಜಿದಾರರು ಆಧಾರ್ ಸಂಖ್ಯೆ ಹೊಂದಿರಬೇಕು. (4)ಅರ್ಜಿದಾರ್ರರ ಐ.ಎಫ್.ಸಿ. ಕೋಡ್ ಹೊಂದಿರುವ ರಾಷ್ಟ್ರೀಕೃತ/ಗ್ರಾಮೀಣ ಬ್ಯಾಂಕ್ ಖಾತೆಗಳನ್ನು ಹೊಂದಿರಬೇಕು. (5)**ಟೂರಿಸ್ಟ್ ಟ್ಯಾಕ್ಸಿ/ಸರಕು ಸಾಗಾಣಿಕೆ ವಾಹನ ಖರೀದಿಸಲು ಸಹಾಯಧನ ಯೋಜನೆಯಲ್ಲಿ ಅರ್ಜಿದಾರರು** (6) ವಾಹನ ಚಾಲನ ಪರವಾನಿಗೆ ಹೊಂದಿರಬೇಕು. (7) ಅರ್ಜಿದಾರರ ವಯಸ್ಸು 18 ರಿಂದ 40 ವರ್ಷಗಳ ಮಿತಿಯಲ್ಲಿರಬೇಕು. **ಹಿಂದುಳಿದ ವರ್ಗಗಳ ವಿಧವೆಯರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಆರ್ಥಿಕ ನೆರವು ಯೋಜನೆಯಲ್ಲಿ** (8) ಅರ್ಜಿದಾರರ ವಯಸ್ಸು 18 ರಿಂದ 60 ವರ್ಷಗಳ ಮಿತಿಯಲ್ಲಿರಬೇಕು. (9) ವಿಧವೆಯಾಗಿರುವ ಬಗ್ಗೆ ಕಂದಾಯ ಅಧಿಕಾರಿಗಳು ನೀಡುತ್ತಿರುವ ಮಾಸಾಶನದ ಪ್ರಮಾಣ ಪತ್ರದ ದೃಢೀಕೃತ ಪ್ರತಿ ಒದಗಿಸುವುದು.

ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವ ಹಿಂದುಳಿದ ವರ್ಗದ ಫಲಾಪೇಕ್ಷಿಗಳು, ಅವರು ವಾಸಿಸುತ್ತಿರುವ ಆಯಾ ಜಿಲ್ಲೆಯ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿ ಅಥವಾ ಆಯಾ ತಾಲ್ಲೂಕಿನ ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿಗಳ ಕಛೇರಿಯಲ್ಲಿ ನಿಗದಿಪಡಿಸಿದ ಉಚಿತ ಅರ್ಜಿಗಳನ್ನು ವಾಹನ ಖರೀದಿ ಯೋಜನೆಯಲ್ಲಿ ಚೈತನ್ಯ ಸಬ್ಸಿಡಿ ಕಂ ಸಾಫ್ಟ್ ಲೋನ್ ಯೋಜನೆಯ ಅರ್ಜಿ ನಮೂನೆಯನ್ನು ಹಾಗೂ ವಿಧವೆಯರು ಸ್ವಯಂ ಉದ್ಯೋಗ ಸಾಲ ಯೋಜನೆಯ ಅರ್ಜಿ ನಮೂನೆಗಳನ್ನು ಪಡೆಯುವುದು. ನಿಗಮದ ವೆಬ್ ಸೈಟ್ www.karnataka.gov.in/dbcdc ಇಲ್ಲಿಯೂ ಪಡೆಯಬಹುದಾಗಿರುತ್ತದೆ. ***ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ /ದಾಖಲಾತಿಗಳೊಂದಿಗೆ ದಿನಾಂಕ: 24/06/2017 ರೊಳಗೆ ಸಲ್ಲಿಸುವುದು.*** ದಿನಾಂಕ: 24/06/2017ರ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ ಸೈಟ್: www.karnataka.gov.in/dbcdc ಸಂಪರ್ಕಿಸಬಹುವುದು.

(ಸಹಿ)
(ಡಾ॥ ಎಂ.ಆರ್.ಏಕಾಂತಪ್ಪ)
ವ್ಯವಸ್ಥಾಪಕ ನಿರ್ದೇಶಕರು.

ದಿನಾಂಕ:23/05/2017

ಪ್ರತಿಯನ್ನು:

1. ಮಾನ್ಯ ಅಧ್ಯಕ್ಷರು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ರವರಿಗೆ ಮಾಹಿತಿಗಾಗಿ.
2. ನಿರ್ದೇಶಕ ಮಂಡಳಿಯ ನಾಮನಿರ್ದೇಶಿತ ಮಾನ್ಯ ನಿರ್ದೇಶಕರುಗಳಿಗೆ ಮಾಹಿತಿಗಾಗಿ.
3. ಅಧ್ಯಕ್ಷರು ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟ(ರಿ) ಶೇಷಾದ್ರಿಪುರಂ ಬೆಂಗಳೂರು-20 ಇವರಿಗೆ ಮಾಹಿತಿಗಾಗಿ.
4. ಎಲ್ಲಾ ಸಹಾಯಕ ಪ್ರಧಾನ ವ್ಯವಸ್ಥಾಪಕರು/ವಿಭಾಗೀಯ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಮಾಹಿತಿಗೆ ಹಾಗೂ ಸೂಕ್ತ ಕ್ರಮಕ್ಕಾಗಿ.
5. ಎಲ್ಲಾ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂಧುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಮಾಹಿತಿಗೆ ಹಾಗೂ ಸೂಕ್ತ ಕ್ರಮಕ್ಕಾಗಿ.
6. ನಿಗಮದ ಕೇಂದ್ರ ಕಛೇರಿ ಎಲ್ಲಾ ಅಧಿಕಾರಿ/ಸಿಬ್ಬಂದಿಯವರಿಗೆ ಮಾಹಿತಿಗಾಗಿ.
7. ಕಂಪ್ಯೂಟರ್ ಪ್ರೋಗ್ರಾಮರ್, ಕೇಂದ್ರ ಕಛೇರಿ ಇವರಿಗೆ ಮಾಹಿತಿಗಾಗಿ ಹಾಗೂ ನಿಗಮದ ವೆಬ್ ಸೈಟ್‌ನಲ್ಲಿ ಅಪ್‌ಲೋಡ್ ಮಾಡುವ ಸಲುವಾಗಿ.
8. ನಿಗಮದ ಸೂಚನಾ ಫಲಕಕ್ಕೆ